**Akashvani : Bangalore**
**National Bulletin In Kannada**
**30.06.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**30.06.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ೧೭ ವರ್ಷಗಳ ನಂತರ ಭಾರತಕ್ಕೆ ಐಸಿಸಿ ಟಿ-೨೦ ವಿಶ್ವಕಪ್ ಪ್ರಶಸ್ತಿ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಅಭಿನಂದನೆ

೨. ಪ್ರಧಾನಿ ಅವರ ೧೧೧ನೇ ಮನ್ ಕಿ ಬಾತ್ ಕಾರ್ಯಕ್ರಮ ಇಂದು ಬೆಳಗ್ಗೆ ೧೧ಗಂಟೆಗೆ ಪ್ರಸಾರ

೩. ಈ ವರ್ಷ ಭಾರತ ೮೦೦ ಶತಕೋಟಿ ಡಾಲರ್ ಐತಿಹಾಸಿಕ ರಫ್ತು ಮಾಡುವ ನಿರೀಕ್ಷೆ - ಸಚಿವ ಪಿಯೂಶ್ ಗೋಯೆಲ್

೪. ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಪ್ರಧಾನಿ ಭೇಟಿ; ರಾಜ್ಯದ ಪ್ರಮುಖ ಯೋಜನೆಗಳ ಅನುಮೋದನೆಗೆ ಮನವಿ

೫. ಕತಾರ್ ಗೆ ಇಂದು ವಿದೇಶಾಂಗ ಸಚಿವ ಡಾ. ಜೈಶಂಕರ್ ಭೇಟಿ; ದ್ವಿಪಕ್ಷೀಯ ಸಂಬಂಧ ಬಲವರ್ಧನೆಗೆ ಒತ್ತು

**<><*<><>*><>**

ಬಾರ್ಬಡೋಸ್ ನ ಕೆನ್ಸಿಂಗ್ಟನ್ ಓವಲ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ೭ ರನ್ ಗಳಿಂದ ದಕ್ಷಿಣ ಆಫ್ರಿಕಾ ತಂಡವನ್ನು ಮಣಿಸಿದ ರೋಹಿತ್ ಶರ್ಮ ಮತ್ತು ತಂಡ ಐಸಿಸಿ ಪುರುಷರ ೨೦ ವಿಶ್ವಕಪ್ ಗೆದ್ದಸಾಧನೆ ಮಾಡಿದೆ. ಇದರೊಂದಿಗೆ ೧೧ ವರ್ಷಗಳ ಜಾಗತಿಕ ಪ್ರಶಸ್ತಿಯ ಬರವನ್ನು ನೀಗಿಸಿದೆ. ಮೊದಲು ಬ್ಯಾಟ್ ಮಾಡಿದ ಭಾರತ , ವಿರಾಟ್ ಕೊಹ್ಲಿ ೭೬ ಮತ್ತು ಅಕ್ಷರ್ ಪಟೇಲ್ ೪೭ ರನ್ ಗಳಿಸಿದ ನೆರವಿನಿಂದ ೨೦ ಓವರ್ ಗಳಲ್ಲಿ ೭ ವಿಕೆಟ್ ಗೆ ೧೭೬ ರನ್ ಕಲೆಹಾಕಿತು. ಇದು ಟಿ೨೦ ವಿಶ್ವಕಪ್ ಫೈನಲ್ ನಲ್ಲಿ ದಾಖಲಾದ ಗರಿಷ್ಠ ಮೊತ್ತವಾಗಿದೆ. ೧೭೭ ರನ್ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ೮ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಲಷ್ಟೇ ಶಕ್ತಗೊಂಡಿತು. ದಕ್ಷಿಣ ಆಫ್ರಿಕಾ ಪರ ಹೆನ್ರಿಚ್

ಕ್ಲಾಸೆನ್ ೫೨ ರನ್ ಗಳಿಸಿದರೆ, ಭಾರತ ತಂಡದ ಪರ ಹಾರ್ದಿಕ್ ಪಾಂಡ್ಯ ೩, ಜಸ್ ಪ್ರಿತ್ ಬುಮ್ರಾ ಮತ್ತು ಅರ್ಷ್ ದೀಪ್ ಸಿಂಗ್ ತಲಾ ೨ ವಿಕೆಟ್ ಪಡೆದರು.  ಟೂರ್ನಿಯಲ್ಲಿ ಅತ್ಯುತ್ತಮ ಇನಿಂಗ್ಸ್ ಆಡಿದ ವಿರಾಟ್ ಕೊಹ್ಲಿ ಸಹಜವಾಗಿಪಂದ್ಯ ಶ್ರೇಷ್ಠ ಗೌರವಕ್ಕೆ ಪಾತ್ರರಾದರು. ಹಾಗೆಯೇ ೮ ಪಂದ್ಯಗಳಿಂದ ೧೫ ವಿಕೆಟ್ ಉರುಳಿಸಿದ ವೇಗಿ ಜಸ್ ಪ್ರಿತ್ ಬುಮ್ರಾ ಟೂರ್ನಿ ಶ್ರೇಷ್ಠ ಗೌರವಕ್ಕೆ ಪಾತ್ರರಾದರು. ೨೦೦೭ರ ನಂತರ ಭಾರತ ಟಿ೨೦ ವಿಶ್ವಕಪ್ ಗೆದ್ದರೆ, ೨೦೧೩ರ ಚಾಂಪಿಯನ್ಸ್ ಟ್ರೋಫಿ ಬಳಿಕ ಐಸಿಸಿ ಟ್ರೋಫಿ ತನ್ನದಾಗಿಸಿಕೊಂಡಿದೆ. ಈ ಮಧ್ಯೆ, ಭಾರತ ತಂಡ ೨ನೇ ಬಾರಿ ಟಿ೨೦ ವಿಶ್ವಕಪ್ ಗೆದ್ದ ಬೆನ್ನಲ್ಲೇ ಕ್ರಿಕೆಟ್ ನ ದಿಗ್ಗಜರಾದ  ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮ ಅಂತಾರಾಷ್ಟ್ರೀಯ ಟಿ೨೦ ಕ್ರಿಕೆಟ್ ಗೆ ನಿವೃತ್ತಿ ಪ್ರಕಟಿಸಿದ್ದಾರೆ. ಪ್ರಶಸ್ತಿ ಗೆದ್ದ ನಂತರ ಕೊಹ್ಲಿ ತಮ್ಮ ನಿವೃತ್ತಿ ನಿರ್ಧಾರ ಪ್ರಕಟಿಸಿದರೆ, ಭಾರತ ತಂಡದ ನಾಯಕ ರೋಹಿತ್ ಶರ್ಮ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ೨೦೨೪ರ ಟಿ೨೦ ವಿಶ್ವಕಪ್ ಗೆದ್ದ ಭಾರತ ತಂಡಕ್ಕೆ ರಾಷ್ಟ್ರಪತಿ, ಉಪರಾಷ್ಟ್ರಪತಿ ಮತ್ತು ಪ್ರಧಾನಿ ಅಭಿನಂದನೆ ಸಲ್ಲಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಾಮಾಜಿಕ ಮಾಧ್ಯಮದಲ್ಲಿ, ಎಂದಿಗೂ ಮರೆಯಲಾಗದ ಪ್ರದರ್ಶನವನ್ನು ನೀಡುವ ಜತೆಗೆ ಟೂರ್ನಿಯುದ್ದಕ್ಕೂ ಅತ್ಯುತ್ತಮ ಕೌಶಲ್ಯಗಳನ್ನು ಪ್ರದರ್ಶಿಸಿತು ಎಂದು ಹೇಳಿದರು. ಉಪರಾಷ್ಟ್ರಪತಿ ಜಗದೀಪ್ ಧನ್ ಕರ್  ಅವರು, ಟಿ೨೦ ವಿಶ್ವಕಪ್ ನಲ್ಲಿ ಮೆನ್ ಇನ್ ಬ್ಲೂ ಅದ್ಭುತ ಗೆಲುವಿನಿಂದ ಭಾರತವು ಹರ್ಷಗೊಂಡಿದೆ. ಪಂದ್ಯಾವಳಿಯುದ್ದಕ್ಕೂ ಟೀಮ್ ಇಂಡಿಯಾದ ಅದ್ಭುತ ಪ್ರದರ್ಶನವು ಅವರ ಸಮರ್ಪಣೆ ಮತ್ತು ಕಠಿಣ ಪರಿಶ್ರಮಕ್ಕೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು. ಭಾರತೀಯ ಕ್ರಿಕೆಟ್ ತಂಡದ ಬಗ್ಗೆ ದೇಶ ಹೆಮ್ಮೆ ಪಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಹಾಗೆಯೇ ಈ ಪಂದ್ಯವು ಐತಿಹಾಸಿಕವಾಗಿದೆ ಎಂದು ಅವರು ಹೇಳಿದರು.

<><*<><>*><>

ಮನ್ ಕಿ ಬಾತ್ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೊ ಕಾರ್ಯಕ್ರಮದ ೧೧೧ನೇ ಸಂಚಿಕೆಯಾಗಿದೆ. ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನಡೆಸಿಕೊಡುತ್ತಿರುವ ಮೊದಲ ಸಂಚಿಕೆ ಇದಾಗಿದೆ. ಈ ಕಾರ್ಯಕ್ರಮವು ಆಕಾಶವಾಣಿ ಮತ್ತು ದೂರದರ್ಶನದ ಸಂಪೂರ್ಣ ನೆಟ್ವರ್ಕ್, ಎಐಆರ್ ನ್ಯೂಸ್ ವೆಬ್ಸೈಟ್ ಮತ್ತು ನ್ಯೂಸ್ಆನ್ಏರ್ ಮೊಬೈಲ್ ಅಪ್ಲಿಕೇಶನ್ ನಲ್ಲಿ ಪ್ರಸಾರವಾಗಲಿದೆ. ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್ ಗಳಲ್ಲಿ ಇದು ನೇರ

ಪ್ರಸಾರವಾಗಲಿದೆ. ಹಿಂದಿ ಪ್ರಸಾರವಾದ ಕೂಡಲೇ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಾದೇಶಿಕ ಭಾಷೆಗಳಲ್ಲಿ ಪ್ರಸಾರ ಮಾಡಲಿದೆ.

<><*<><>*><>

ಈ ವರ್ಷ ಭಾರತವು ೮೦೦ ಶತಕೋಟಿ ಡಾಲರ್ ಐತಿಹಾಸಿಕ ರಫ್ತು ಸಾಧಿಸಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಭರವಸೆ ವ್ಯಕ್ತಪಡಿಸಿದ್ದಾರೆ. ಮಧ್ಯಸ್ಥಗಾರರೊಂದಿಗೆ ಉತ್ಪಾದಕ ಸಂವಾದ ನಡೆಸಿದ ಕೇಂದ್ರ ಸಚಿವರು, ಮುಂಬೈನ ಭಾರತ ರತ್ನಂ ಮೆಗಾ ಸಿಎಫ್ ಸಿಯಲ್ಲಿ ಸಾಂತಾಕ್ರೂಜ್ ಎಲೆಕ್ಟ್ರಾನಿಕ್ಸ್ ರಫ್ತು ಸಂಸ್ಕರಣಾ ವಲಯ , ರಫ್ತು ಕ್ರೆಡಿಟ್ ಗ್ಯಾರಂಟಿ ಕಾರ್ಪೋರೇಷನ್ ಆಫ್ ಇಂಡಿಯಾ ಮತ್ತು ಕಂಟ್ರೋಲರ್ ಜನರಲ್ ಆಫ್ ಪೇಟೆಂಟ್ಸ್, ಡಿಸೈನ್ ಮತ್ತು ಟ್ರೇಡ್ ಮಾರ್ಕ್ಸ್ ಗಳ ಪ್ರಗತಿಯನ್ನು ಪರಿಶೀಲಿಸಿದರು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ನಮ್ಮ ರಫ್ತು ಬೆಳೆಯುತ್ತಿದೆ ಎಂಬುದಕ್ಕೆ ಇದು ಸಕಾರಾತ್ಮಕ ಸಂಕೇತವಾಗಿದೆ ಮತ್ತು ಇಂದು ಜಗತ್ತು ಭಾರತದೊಂದಿಗೆ ವ್ಯಾಪಾರ ಮತ್ತು ಹೂಡಿಕೆ ಮಾಡಲು ಬಯಸುತ್ತದೆ ಎಂಬುದನ್ನು ಪ್ರತಿಬಿಂಬಿಸುತ್ತದೆ ಎಂದು ಒತ್ತಿ ಹೇಳಿದರು.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ರಾಜ್ಯದ ಪ್ರಮುಖ ಯೋಜನೆಗಳ ಅನುಮೋದನೆ ಕುರಿತು ಮನವಿ ಸಲ್ಲಿಸಿದರು. ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಹಾಗೂ ೪೦೦ ಮೆ.ವ್ಯಾ ವಿದ್ಯುತ್ ಉತ್ಪಾದನೆ ಮಾಡುವ ಮೇಕೆದಾಟು ಅಣೆಕಟ್ಟು ಯೋಜನೆಯ ೯ ಸಾವಿರ ಕೋಟಿ ರೂಪಾಯಿಗಳ ಡಿಪಿಆರ್ ಗೆ ಕೇಂದ್ರ ಜಲ ಆಯೋಗದಿಂದ ಅನುಮೋದನೆ ಬಾಕಿ ಇದೆ. ಮೇಕೆದಾಟು ಯೋಜನೆಗೆ ಪ್ರಧಾನಿಗಳು ಖುದ್ದಾಗಿ ಆಸಕ್ತಿ ವಹಿಸುವಂತೆಯೂ ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್ ೨೦೨೩-೨೦೨೪ ನಲ್ಲಿ ಘೋಷಿಸಿದಂತೆ ೫೩೦೦ ಕೋಟಿ ರೂ.ಗಳ ಬಿಡುಗಡೆ ಹಾಗೂ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆಗೆ ಶೀಘ್ರವಾಗಿ ತೀರುವಳಿ ನೀಡುವಂತೆ ಜಲಶಕ್ತಿ ಸಚಿವಾಲಯ ಮತ್ತು ಪರಿಸರ ಹಾಗೂ ಅರಣ್ಯ ಸಚಿವಾಲಯದ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಿದ್ದಾರೆ.

<><*<><>*><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ , ಇಂದು ಕತಾರ್ ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಭೇಟಿಯ ವೇಳೆ ಅವರು ಕತಾರ್ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಶೇಖ್ ಮೊಹಮ್ಮದ್ ಬಿನ್ ಅಬ್ದುಲ್ ರಹ್ಮಾನ್ ಅವರನ್ನು ಭೇಟಿ ಮಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಅವರ ಭೇಟಿಯು ರಾಜಕೀಯ, ವ್ಯಾಪಾರ, ಹೂಡಿಕೆ, ಇಂಧನ, ಭದ್ರತೆ, ಸಾಂಸ್ಕೃತಿಕ ಮತ್ತು ಜನರ ನಡುವಿನ ಸಂಬಂಧ ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳು ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಪರಿಶೀಲಿಸಲು ಎರಡೂ ಕಡೆಯವರಿಗೆ ಅನುವು ಮಾಡಿಕೊಡಲಿದೆ.

<><*<><>*><>

ಕಾನೂನು ಮತ್ತು ನ್ಯಾಯ ಸಚಿವಾಲಯದ ಕಾನೂನು ವ್ಯವಹಾರಗಳ ಇಲಾಖೆ ಮುಂಬೈನಲ್ಲಿ ಇಂದು 'ಕ್ರಿಮಿನಲ್ ನ್ಯಾಯ ವ್ಯವಸ್ಥೆಯ ಆಡಳಿತದಲ್ಲಿ ಭಾರತದ ಪ್ರಗತಿಪರ ಹಾದಿ' ಎಂಬ ಸಮ್ಮೇಳನವನ್ನು ಆಯೋಜಿಸಿದೆ. ನ್ಯಾಯಾಧೀಶರು, ಪ್ರಾಸಿಕ್ಯೂಟರ್ ಗಳು, ವಕೀಲರು, ಕಾನೂನು ಜಾರಿ ಮತ್ತು ತನಿಖಾ ಸಂಸ್ಥೆಗಳ ಅಧಿಕಾರಿಗಳು, ಜಿಲ್ಲಾಡಳಿತದ ಅಧಿಕಾರಿಗಳು, ಶಿಕ್ಷಣ ತಜ್ಞರು ಮತ್ತು ಕಾನೂನು ವಿದ್ಯಾರ್ಥಿಗಳು ಮತ್ತು ನಾಗರಿಕರು ಸೇರಿದಂತೆ ಎಲ್ಲಾ ಪಾಲುದಾರರಲ್ಲಿ 'ಭಾರತೀಯ ನ್ಯಾಯ ಸಂಹಿತಾ ೨೦೨೩', 'ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ೨೦೨೩' ಮತ್ತು 'ಭಾರತೀಯ ಸಾಕ್ಷರತಾ ಅಧಿನಿಯ, ೨೦೨೩' ಎಂಬ ಮೂರು ಹೊಸ ಕ್ರಿಮಿನಲ್ ಕಾನೂನುಗಳ ಬಗ್ಗೆ ಜಾಗೃತಿ ಮೂಡಿಸುವುದು ಸಮ್ಮೇಳನದ ಉದ್ದೇಶವಾಗಿದೆ.

<><*<><>*><>

ದೆಹಲಿ ಟರ್ಮಿನಲ್ ೧ ರಿಂದ ಕಾರ್ಯನಿರ್ವಹಿಸಬೇಕಿದ್ದ ವಿಮಾನಗಳನ್ನು ಐಜಿಐ ವಿಮಾನ ನಿಲ್ದಾಣದ ಟರ್ಮಿನಲ್ ೨ ಮತ್ತು ೩ಕ್ಕೆ ಸ್ಥಳಾಂತರಿಸಲಾಗಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ಈ ವಿಮಾನಗಳು ನಿನ್ನೆ ಟರ್ಮಿನಲ್ ೨ ಮತ್ತು ೩ ರಿಂದ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ ಎಂದು ಸಚಿವಾಲಯವು ಸಾಮಾಜಿಕ ಮಾಧ್ಯಮ ಮಾಹಿತಿ ಹಂಚಿಕೊಂಡಿದೆ.

<><*<><>*><>

ತಂಬಾಕು ರೈತರ ಮತ್ತು ಉದ್ಯಮದ ಮಧ್ಯಸ್ಥಗಾರರ ಹಿತಾಸಕ್ತಿಗಳನ್ನು ರಕ್ಷಿಸುವುದಾಗಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಭರವಸೆ ನೀಡಿದ್ದಾರೆ. ಕಳೆದ

ರಾತ್ರಿ ಹೈದರಾಬಾದ್ ನಲ್ಲಿ ತಂಬಾಕು ರೈತರು ಮತ್ತು ಉದ್ಯಮದ ಪ್ರತಿನಿಧಿಗಳನ್ನುದ್ದೇಶಿಸಿ ಮಾತನಾಡಿದ ಸಚಿವರು, ರೈತರು ಉತ್ಪಾದಿಸುವ ಹೆಚ್ಚುವರಿ ತಂಬಾಕಿನ ಮೇಲಿನ ದಂಡವನ್ನು ಮನ್ನಾ ಮಾಡಲು ಎಲ್ಲಾ ಪ್ರಯತ್ನಗಳನ್ನು ಮಾಡುವುದಾಗಿ ಭರವಸೆ ನೀಡಿದರು. ತಂಬಾಕು ರೈತರು ಬ್ಯಾಂಕುಗಳಿಂದ ಪಡೆದ ಸಾಲದ ಮೇಲೆ ಕೃಷಿ ಮೂಲಸೌಕರ್ಯ ನಿಧಿಯಡಿ ಶೇ.೯ರ ಬಡ್ಡಿದರದಲ್ಲಿ ಶೇ.೩ರಷ್ಟು ಬಡ್ಡಿ ಸಹಾಯಧನ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಅವರು ರೈತರನ್ನು ಒತ್ತಾಯಿಸಿದರು.

<><*<><>*><>

ಇಂಡೋನೇಷ್ಯಾದ ಯೋಗ್ಯಕರ್ತಾದಲ್ಲಿ ನಡೆಯುತ್ತಿರುವ ಏಷ್ಯಾ ಜೂನಿಯರ್ ಬ್ಯಾಡ್ಮಿಂಟನ್ ಮಿಶ್ರ ತಂಡ ಚಾಂಪಿಯನ್ ಶಿಪ್ ನಲ್ಲಿ ಭಾರತ ತಂಡವು ಫಿಲಿಪ್ಪೀನ್ಸ್ ವಿರುದ್ಧ ೩-೨ ಅಂತರದಲ್ಲಿ ಜಯ ಸಾಧಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ. ಗುಂಪು ವಿಜೇತರನ್ನು ನಿರ್ಧರಿಸಲು ಭಾರತ ತಂಡ ಇಂದು ಆತಿಥೇಯ ಇಂಡೋನೇಷ್ಯಾ ತಂಡವನ್ನು ಎದುರಿಸಲಿದೆ.

<><*<><>*><>

ಕಡಿಮೆ ಇಂಗಾಲದ ಇಂಧನದ ಅಭಿವೃದ್ಧಿಯನ್ನು ವೇಗಗೊಳಿಸುವ ನಿಟ್ಟಿನಲ್ಲಿ ಭಾರತಕ್ಕೆ ಸಹಾಯ ಮಾಡಲು ವಿಶ್ವ ಬ್ಯಾಂಕ್ ಎರಡನೇ ಸುತ್ತಿನ ೧.೫ ಶತಕೋಟಿ ಡಾಲರ್ ಆರ್ಥಿಕ ನೆರವನ್ನು ಅನುಮೋದಿಸಿದೆ. ಹಸಿರು ಜಲಜನಕ, ವಿದ್ಯುದ್ವಿಭಜಕಗಳು ಮತ್ತು ನವೀಕರಿಸಬಹುದಾದ ಇಂಧನ ಹರಿಯುವಿಕೆಯನ್ನು ಹೆಚ್ಚಿಸುವ ಸಲುವಾಗಿ ಮಾರುಕಟ್ಟೆಯನ್ನು ಉತ್ತೇಜಿಸಲು ಆರ್ಥಿಕ ನೆರವನ್ನು ವಿಸ್ತರಿಸಲಾಗಿದೆ. ಇದಕ್ಕೂ ಮೊದಲು, ೨೦೨೩ರ ಜೂನ್ ನಲ್ಲಿ, ವಿಶ್ವ ಬ್ಯಾಂಕ್ ಮೊದಲ ಕಡಿಮೆ ಇಂಗಾಲದ ಇಂಧನ ಕಾರ್ಯಕ್ರಮ ಅಭಿವೃದ್ಧಿ ನೀತಿ ಕಾರ್ಯಾಚರಣೆಗೆ ೧.೫ ಶತಕೋಟಿ ಡಾಲರ್ಸ್ ಆರ್ಥಿಕ ನೆರವನ್ನು ಅನುಮೋದಿಸಿತ್ತು. ಹೊಸ ಧನಸಹಾಯವು ಭಾರತವು ತನ್ನ ಹಸಿರು ಹೈಡ್ರೋಜನ್ ಉತ್ಪಾದನೆಯನ್ನು ವಿಸ್ತರಿಸಲು ಮತ್ತು ಕಡಿಮೆ ಇಂಗಾಲದ ಹೂಡಿಕೆಗಳಿಗೆ ಹಣಕಾಸು ಕ್ರೋಢೀಕರಣವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದು ನಿರೀಕ್ಷಿಸಲಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೦೦ ಕ್ಕೆ <>*><>